ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಅಸ್ಪೃಶ್ಯ ಜನಾಂಗದವರಿಗೆ ಒಳಮೀಸಲಾತಿ ನೀಡುವ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

43 (432) ಉಪ ಮುಖ್ಯಮಂತ್ರಿಗಳು ಮತ್ತು ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಒಳಮೀಸಲಾತಿಗೆ ಅವಕಾಶವಿಲ್ಲದಿರುವುದರಿಂದ ಪರಿಶಿಷ್ಟ ಜಾತಿಯ ಅಸ್ಪೃಶ್ಯ ಜನಾಂಗದವರಿಗೆ ಮೀಸಲಾತಿ ಸರಿಯಾಗಿ ಸಿಗದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಅನ್ಯಾಯವನ್ನು ಸರಿಪಡಿಸಲು ಒಳಮೀಸಲಾತಿ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಸುಪ್ರೀಂ ಕೋರ್ಟ್ ಕೂಡ ಇತ್ತೀಚೆಗೆ ತೀರ್ಪು ನೀಡಿದ್ದು ಈ ಬಗ್ಗೆ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಿದೆ;

(ಇ) ಮೀಸಲಾತಿ ಸೌಲಭ್ಯದಿಂದ ವಂಚಿತರಾಗುತ್ತಿರುವ ಅಸ್ಪೃಶ್ಯ ಜನಾಂಗದವರಿಗೆ ನ್ಯಾಯ ದೊರಕಿಸಿಕೊಡಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುತ್ತದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು?